ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ ಶೈಶಾ-04/ವಿ.ವೇ-02 /2011-12

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-12.
ದಿನಾಂಕ: 29.07.2011

## ಕಿತ್ತೂರು ರಾಣಿ ಚನ್ನಮ್ಮ ಪುರಸ್ಕಾರ ಮತ್ತು ಪ್ರತಿಭಾನ್ವಿತರಿಗೆ ಶುಲ್ಕ ಉಚಿತ

2006-07 ನೇ ಶೈಕ್ಷಣಿಕ ಸಾಲಿನಿಂದ ರಾಜ್ಯ ಸರ್ಕಾರವು ಈ ಎರಡು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ.

ಈ ಎರಡು ಕಾರ್ಯಕ್ರಮಗಳಲ್ಲಿ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳ ವಿದ್ಯಾರ್ಥಿಗಳು, ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದ್ವಿತೀಯ ಪಿಯುಸಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳು ಫಲಾನುಭವಿಗಳಾಗಿರುತ್ತಾರೆ.

1. **ಕಿತ್ತೂರು ರಾಣಿ ಚನ್ನಮ್ಮ ಪುರಸ್ಕಾರ** ಈ ಕಾರ್ಯಕ್ರಮದಡಿ ಪ್ರತಿ ಜಿಲ್ಲೆಯಲ್ಲಿ ಪದವಿ ಪೂರ್ವ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆಯುವ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳ ಹತ್ತು ಹೆಣ್ಣು ಮಕ್ಕಳಿಗೆ ವೃತ್ತಿ ಶಿಕ್ಷಣ ಪಡೆಯಲು ಸರ್ಕಾರ ಹಣಕಾಸಿನ ನೆರವು ನೀಡುತ್ತದೆ.
2. **ಪ್ರತಿಭಾವಂತರಿಗೆ ಶುಲ್ಕ ಉಚಿತ:** ಈ ಕಾರ್ಯಕ್ರಮದಡಿ ಬಡ ಕುಟುಂಬಗಳ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಪದವಿ ಪೂರ್ವ ಪರೀಕ್ಷೆಯಲ್ಲಿ ಶೇ 80% ಗಿಂತ ಹೆಚ್ಚು ಅಂಕಗಳನ್ನು ಗಳಿಸಿದ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಇಂಜನಿಯರಿಂಗ್, ವೈದ್ಯಕೀಯ, ದಂತ ವಿಜ್ಞಾನ, ಕೃಷಿ ಮತ್ತು ಪಶು ವೈದ್ಯ ವಿಜ್ಞಾನ ದಂತಹ ವೃತ್ತಿಪರ ಶಿಕ್ಷಣದ ಶುಲ್ಕಗಳನ್ನು ಸರ್ಕಾರ ನೀಡುತ್ತದೆ.

**ಆಯ್ಕೆಯ ವಿಧಿ ವಿಧಾನ:-** ಪ್ರತಿ ವರ್ಷ ಸಿ.ಇ.ಟಿ ಪ್ರಕ್ರಿಯೆ ಮುಗಿಯುವ ವೇಳೆಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯು ಪ್ರತಿ ಜಿಲ್ಲೆಗೆ ಸಂಬಂಧಿಸಿದಂತೆ ಆ ವರ್ಷದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸುಮಾರು 300 ವಿದ್ಯಾರ್ಥಿನಿಯರು ಪಟ್ಟಿ ಹಾಗೂ 80%ಗಿಂತ ಹೆಚ್ಚು ಅಂಕಗಳನ್ನು ಪಡೆದ ಮತ್ತು 300 ವಿದ್ಯಾರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತದೆ. ಆಯಾ ಜಿಲ್ಲಾ ಉಪನಿರ್ದೇಶಕರು ಸಂಬಂಧಪಟ್ಟ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದ್ವಿತೀಯ ಪಿಯುಸಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳು ಪ್ರಾಂಶುಪಾಲರ ಮೂಲಕ ವಿದ್ಯಾರ್ಥಿಯಿಂದ ಅಗತ್ಯ ಮಾಹಿತಿ ಪಡೆದು (ಮಾರ್ಗ ಸೂಚಿಯ ಕಂಡಿಕೆ - 03ರಂತೆ) ಕ್ರೋಢೀಕರಿಸಿ ಜಿಲ್ಲಾ ಮಟ್ಟದಲ್ಲಿ ರಚನೆಯಾಗಿರುವ ಸಮಿತಿಯ ಅನುಮೋದನೆ ಪಡೆದು ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸುತ್ತಾರೆ.

ಇಲಾಖೆಯು ಪ್ರತಿ ಜಿಲ್ಲೆಯಿಂದ ಪಡೆದ ಪ್ರಸ್ತಾವನೆಯನ್ನು ಕ್ರೋಢೀಕರಿಸಿ ಕಾಲೇಜು ಶಿಕ್ಷಣ ನಿರ್ದೇಶನಾಲಯ ಹಾಗೂ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಸಲ್ಲಿಸುತ್ತದೆ.

ಸಂಬಂಧಪಟ್ಟ ಇಲಾಖೆಗಳು ಸದರಿ ವಿದ್ಯಾರ್ಥಿಗಳ ಪ್ರಸ್ತಾವನೆಯನ್ನು ಪರಿಶೀಲಿಸಿ ರಾಜ್ಯಮಟ್ಟದ ಸಮಿತಿಯ ಅನುಮೋದನೆಯೊಂದಿಗೆ ಅರ್ಹ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿ ಪಡಿಸಿದ ಸಿ.ಇ.ಟಿ ಶುಲ್ಕವನ್ನು ಮರುಪಾವತಿಸಲು ಕ್ರಮ ಕೈಗೊಳ್ಳುತ್ತದೆ. ಈ ಮಾರ್ಗ ಸೂಚಿಯನ್ನು website ನಲ್ಲಿ ಹಾಕಲಾಗಿದೆ.

ಇದರ ಬಗ್ಗೆ ಹೆಚ್ಚಿನ ವಿವರಗಳನ್ನು ಶಿಕ್ಷಣ ಇಲಾಖೆ ಹೊರಡಿಸಿರುವ ಮಾರ್ಗಸೂಚಿಯನ್ನು ಇಲಾಖೆಯ website ನಲ್ಲಿ ನೋಡಬಹುದು.

ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈ ಶಾ/ಕಿರಾಚಿಪು/ಪ್ರಶುಉ/2007-08

ಆಯುಕ್ತರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, ಮಲ್ಲೇಶ್ವರಂ 18ನೇ ಅಡ್ಡರಸ್ತೆ,
ಬೆಂಗಳೂರು-12. ದಿನಾಂಕ 18-10-2008.

## ಅತ್ಯಾಧ್ಯತೆ ಕಾಲಮಿತಿ ವಿಷಯ

ಉಪ ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,
.................................... ಜಿಲ್ಲೆ

ಮಾನ್ಯರೆ,

ವಿಷಯ: 2006-07ನೇ ಸಾಲಿನ ತಮ್ಮ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಘೋಷಿಸಿರುವ "ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ ಮತ್ತು ಪ್ರತಿಭಾನ್ವಿತರಿಗೆ ಶುಲ್ಕ ಉಚಿತ" ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಸ್ಕೀಂ ಡಿಟೈಲ್ಸ್ ಹಾಗೂ ಮಾರ್ಗ ಸೂಚಿಗಳು.

ಉಲ್ಲೇಖ:ಸರ್ಕಾರದ ಪತ್ರ ಸಂಖ್ಯೆ ಇಡಿ 116 ಯೋಯೋಕ 2006 ದಿನಾಂಕ 27-06-2006.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸನ್ಮಾನ್ಯ ಉಪ ಮುಖ್ಯಮಂತ್ರಿಯವರು 2006-07ನೇ ಸಾಲಿನ ತಮ್ಮ ಆಯವ್ಯಯ ಭಾಷಣದಲ್ಲಿ ಘೋಷಿಸಿದ "ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ ಮತ್ತು ಪ್ರತಿಭಾವಂತರಿಗೆ ಶುಲ್ಕ ಉಚಿತ" ಎಂಬ ಎರಡು ಕಾರ್ಯಕ್ರಮಗಳನ್ನು 2006-07 ಮತ್ತು 2007-08ನೇ ಶೈಕ್ಷಣಿಕ ವರ್ಷಗಳಲ್ಲಿ ಅನುಷ್ಠಾನಗೊಳಿಸಿರುವುದು ಸರಿಯಷ್ಟೆ. 2006-07ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದ ಜೊತೆ ಸರ್ಕಾರವು ಸಿದ್ಧಪಡಿಸಿ ಕಳುಹಿಸಿದ ಮಾರ್ಗಸೂಚಿಯ ಪ್ರತಿ ಮತ್ತು ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ, 2008ನೇ ಏಪ್ರಿಲ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿನಿಯರ ಹಾಗೂ ಶೇಕಡ 80ಕ್ಕಿಂತ ಅಧಿಕ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಪಟ್ಟಿಯನ್ನು ಈ ಪತ್ರದ ಜೊತೆಗೆ ಲಗತ್ತಿಸಿ ನಿಮಗೆ ಕಳುಹಿಸಿಕೊಡಲಾಗಿದೆ. **ಸಿ ಇ ಟಿ ಘಟಕದಿಂದ ನಡೆಸುವ ಪರೀಕ್ಷೆ ಬರೆದು ವೃತ್ತಿ ಶಿಕ್ಷಣ ಕೋರ್ಸ್‌ಗಳ ಕಾಲೇಜುಗಳಿಗೆ ಹಾಗೂ ಕೃಷಿ/ಪಶುವೈದ್ಯ ವಿಜ್ಞಾನ ವಿದ್ಯಾಲಯ ಮುಂತಾದ ವೃತ್ತಿ ಶಿಕ್ಷಣ ಕೋರ್ಸ್‌ಗಳ ಕಾಲೇಜುಗಳಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು/ವಿದ್ಯಾರ್ಥಿನಿಯರು ಮಾತ್ರ ಈ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಇಂತಹ ವಿದ್ಯಾರ್ಥಿಗಳ/ವಿದ್ಯಾರ್ಥಿನಿಯರ ಕುಟುಂಬವು ಬಿ ಪಿ ಎಲ್ ಕಾರ್ಡ್ ಹೊಂದಿರಬೇಕು. ಈ ಬಗ್ಗೆ ಖಚಿತಪಡಿಸಿಕೊಂಡು ವಿದ್ಯಾರ್ಥಿಗಳು/ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡಲು ತಿಳಿಸಲಾಗಿದೆ.**

.......2

ಇದು ಕಾಲಮಿತಿ ವಿಷಯವಾಗಿರುವುದರಿಂದ ಇವುಗಳ ಅನುಷ್ಠಾನದ ಬಗ್ಗೆ ವೈಯುಕ್ತಿಕ ಆಸಕ್ತಿವಹಿಸಿ ಹಿಂದಿನ ವರ್ಷಗಳಂತೆ ಸರ್ಕಾರದ ಮಾರ್ಗಸೂಚಿಯನ್ವಯ ತಾವು ತ್ವರಿತವಾಗಿ 2008-09 ನೇ ಶೈಕ್ಷಣಿಕ ಸಾಲಿನ ಪೂರ್ವಭಾವಿ ಕ್ರಮಗಳನ್ನು ಜರುಗಿಸಲು ಕೂಡಲೇ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ನಿಮ್ಮ ಜಿಲ್ಲೆಯಲ್ಲಿ ಈ ಸೌಲಭ್ಯ ಪಡೆಯಲು ಅರ್ಹರಾದ ವಿದ್ಯಾರ್ಥಿಗಳ ಪಟ್ಟಿಯನ್ನು ಈ ಪತ್ರದ ಜೊತೆ ಲಗತ್ತಿಸಿರುವ ನಿಗದಿತ ನಮೂನೆಯಲ್ಲಿ ಲಗತ್ತುಗಳೊಡನೆ ಈ ನಿರ್ದೇಶನಾಲಯದ ನೋಡಲ್ ಅಧಿಕಾರಿಯಾದ ಶ್ರೀಮತಿ ಸುಮತಿ ಜಿ ನಾಯಕ್, ಸಹಾಯಕ ನಿರ್ದೇಶಕರು, ಕೊಠಡಿ ಸಂಖ್ಯೆ 10, ಕೆಳಮಹಡಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ 18ನೇ ಅಡ್ಡರಸ್ತೆ, ಬೆಂಗಳೂರು-12 ಈ ವಿಳಾಸಕ್ಕೆ ದಿನಾಂಕ 14-11-2008 ರೊಳಗೆ ಕಡ್ಡಾಯವಾಗಿ ಸಲ್ಲಿಸಲು ಸೂಚಿಸಲಾಗಿದೆ.

ತಮ್ಮ ನಂಬುಗೆಯ,

ಆಯುಕ್ತರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ.
2. ಸರ್ಕಾರದ ಸಹ ಕಾರ್ಯದರ್ಶಿಗಳು(ಯೋಜನೆ) ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ.

ಪ್ರತಿಗಳು: ಜಿಲ್ಲಾ ಉಪ ನಿರ್ದೇಶಕರುಗಳ ಮೂಲಕ

1. ಜಿಲ್ಲಾಧಿಕಾರಿಗಳು ---------------------------------------- ಜಿಲ್ಲೆ
2. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ---------------------------------------- ಜಿಲ್ಲೆ
3. ಉಪ ನಿರ್ದೇಶಕರು(ಆಹಾರ) ---------------------------------------- ಜಿಲ್ಲೆ
4. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ---------------------------------------- ಜಿಲ್ಲೆ
5. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಟ್ಟದ ಅಧಿಕಾರಿ ---------------------------------------- ಜಿಲ್ಲೆ
6. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ---------------------------------------- ಜಿಲ್ಲೆ

## ಶಿಕ್ಷಣ ಇಲಾಖೆ

## ಉನ್ನತ ಶಿಕ್ಷಣ

ವಿಷಯ:- 2006-07ನೇ ಸಾಲಿನಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿಗಳ ವೃತ್ತಿ ಶಿಕ್ಷಣ ವ್ಯಾಸಂಗಕ್ಕೆ ನೆರವು ನೀಡುವ ಬಗ್ಗೆ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಎರಡು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

## ಮಾರ್ಗಸೂಚಿಗಳು

2006-07 ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಉಪ ಮುಖ್ಯಮಂತ್ರಿಯವರು (1) ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ; ಮತ್ತು (2) "ಪ್ರತಿಭಾವಂತರಿಗೆ ಶುಲ್ಕ ಉಚಿತ" ಎಂಬ ಎರಡು ಕಾರ್ಯಕ್ರಮಗಳನ್ನು ಘೋಷಿಸಿದ್ದಾರೆ. ಈ ಕಾರ್ಯಕ್ರಮಗಳ ವಿವರಗಳು ಈ ರೀತಿ ಇವೆ.

1. *ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ:-* ಈ ಕಾರ್ಯಕ್ರಮದಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ ಪದವಿಪೂರ್ವ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆಯುವ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಹತ್ತು ಹೆಣ್ಣು ಮಕ್ಕಳಿಗೆ ಅಂದರೆ ಒಟ್ಟು 270 ಹೆಣ್ಣು ಮಕ್ಕಳಿಗೆ ವೃತ್ತಿಶಿಕ್ಷಣ ಪಡೆಯಲು ಹಣಕಾಸು ನೆರವನ್ನು ಸರ್ಕಾರ ನೀಡುತ್ತದೆ. + 10 / 280

2. *ಪ್ರತಿಭಾವಂತರಿಗೆ ಶುಲ್ಕ ಉಚಿತ:-* ಈ ಕಾರ್ಯಕ್ರಮದಡಿಯಲ್ಲಿ ಬಡಕುಟುಂಬಗಳ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಪದವಿ ಪೂರ್ವ ಕೋರ್ಸಿನಲ್ಲಿ ಶೇಕಡಾ 80 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಇಂಜನೀರಿಂಗ್, ವೈದ್ಯಕೀಯ, ದಂತ ವಿಜ್ಞಾನ, ಕೃಷಿ ಮತ್ತು ಪಶು ವೈದ್ಯ ವಿಜ್ಞಾನದಂತಹ ವೃತ್ತಿಪರ ಶಿಕ್ಷಣ ಶುಲ್ಕಗಳನ್ನು ಸರ್ಕಾರ ನೀಡುತ್ತದೆ.

ಮೇಲಿನ ಎರಡು ಕಾರ್ಯಕ್ರಮಗಳು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿಗಳಿಗಾಗಿ ರೂಪಿಸಲಾಗಿರುವುದರಿಂದ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಮಾರ್ಗಸೂಚಿಗಳನ್ನು ರೂಪಿಸಲಾಗಿದೆ-

1) ಈ ಕಾರ್ಯಕ್ರಮಗಳು ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿರುವ ಮತ್ತು ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಅನ್ವಯವಾಗುವುದು.

2) "ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ" ಕ್ಕಾಗಿ ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡುವ ಸಲುವಾಗಿ ಪ್ರತಿ ಜಿಲ್ಲೆಯಲ್ಲಿ ದ್ವಿತೀಯ ಪದವಿಪೂರ್ವ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿದ 300 ವಿದ್ಯಾರ್ಥಿನಿಯರ ಪಟ್ಟಿಯನ್ನು "ಪ್ರತಿಭಾನ್ವಿತರಿಗೆ ಶುಲ್ಕ ಉಚಿತ" ಕಾರ್ಯಕ್ರಮದ ಫಲಾನುಭವಿಗಳನ್ನು ಆಯ್ಕೆ ಮಾಡಲು ಶೇಕಡ 80 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳ ಪಟ್ಟಿಯನ್ನು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರು ಪ್ರತಿ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ ಒದಗಿಸತಕ್ಕದ್ದು.

3) ಜಿಲ್ಲಾ ಪದವಿ ಪೂರ್ವ ಶಿಕ್ಷಣ ಉಪನಿರ್ದೇಶಕರು ಸದರಿ ಪಟ್ಟಿಯಲ್ಲಿರುವ ವಿದ್ಯಾರ್ಥಿನಿಯರು ಹಾಗೂ ಶೇಕಡಾ 80 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳು ವ್ಯಾಸಂಗ ಮಾಡಿದ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ಮೂಲಕ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿನಿಯರ / ವಿದ್ಯಾರ್ಥಿಗಳ ವಿವರಗಳನ್ನು ದಾಖಲೆಯೊಂದಿಗೆ (ಅವರು ಸರ್ಕಾರದಿಂದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬ ಎಂದು ಪಡೆದಿರುವ ದೃಢೀಕೃತಗೊಂಡ ಗಣಕೀಕೃತ ಫೋಟೋ ಅಥವಾ ಗಣಕೀಕೃತ ಪಡಿತರ ಕೂಪನ್‌ನ ಪ್ರತಿ) ಮಾಹಿತಿಯನ್ನು ಪರಿಗ್ರಹಿಸತಕ್ಕದ್ದು.

4) ಮೇಲೆ ನಮೂದಿಸಿರುವಂತೆ ಸಂಗ್ರಹಿಸಿದ ಮಾಹಿತಿಯನ್ನು ಖುದ್ದಾಗಿ ಪರಿಶೀಲಿಸುವ ಸಲುವಾಗಿ ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1. | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2. | ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣ ಅಧಿಕಾರಿ | ಉಪಾಧ್ಯಕ್ಷರು |
| 3. | ಉಪನಿರ್ದೇಶಕರು (ಆಹಾರ) | ಸದಸ್ಯರು |
| 4. | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ | ಸದಸ್ಯರು |
| 5. | ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿ | ಸದಸ್ಯರು |
| 6. | ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 7. | ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |

5) ಮೇಲ್ಕಂಡಂತೆ ರಚಿಸಲಾಗಿರುವ ಜಿಲ್ಲಾ ಸಮಿತಿಯು ಬಡತನ ರೇಖೆಗಿಂತ ಕೆಳಮಟ್ಟದಲ್ಲಿ ಇರುವ ಕುಟುಂಬಗಳಿಗೆ ಸೇರಿದ ವಿದ್ಯಾರ್ಥಿನಿಯರು ಮತ್ತು ವಿದ್ಯಾರ್ಥಿಗಳು ಎಂದು ಗುರ್ತಿಸಲ್ಪಟ್ಟ ಎಲ್ಲಾ ಫಲಾನುಭವಿಗಳ ಮಾಹಿತಿಯನ್ನು ಆಹಾರ ಇಲಾಖೆಯಿಂದ ದಿನಾಂಕ 18.4.2005 ರಲ್ಲಿ ನಿಗದಿಗೊಳಿಸಲಾದ ನಿರ್ದಿಷ್ಟ ಮಾನದಂಡಗಳ ಬಗ್ಗೆ ಪ್ರತಿ ವಿದ್ಯಾರ್ಥಿಯ ವಿವರಗಳನ್ನು ಪರಿಶೀಲಿಸಿ, ಅವರು ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಸದಸ್ಯರು ಎಂಬ ಬಗ್ಗೆ ದೃಢೀಕರಣ ನೀಡಬೇಕು.

6) ಪ್ರತಿ ಜಿಲ್ಲೆಯಿಂದ ಬರುವ ದೃಢೀಕರಣಗೊಳಿಸಿದ ಮಾಹಿತಿಯನ್ನು ಪರಿಶೀಲಿಸಿ ಅರ್ಹ ಫಲಾನುಭವಿಗಳೆಂದು ಗುರ್ತಿಸಿ ಅವರುಗಳ ವೃತ್ತಿ ಶಿಕ್ಷಣ ಶುಲ್ಕ ಮರು ಪಾವತಿಸಲು, ಈ ಕೆಳಕಂಡಂತೆ ರಾಜ್ಯ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ.

ಎ) <u>ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ</u> -

| | | |
|---|---|---|
| 1. | ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ | ಅಧ್ಯಕ್ಷರು |
| 2. | ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ | ಸದಸ್ಯರು |
| 3. | ಸಹ ನಿರ್ದೇಶಕರು (ಆಡಳಿತ) ಪದವಿ ಪೂರ್ವ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |

ಬಿ) <u>ಪ್ರತಿಭಾವಂತರಿಗೆ ಶುಲ್ಕ ಉಚಿತ</u>

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ | ಅಧ್ಯಕ್ಷರು |
| 2. | ಲೆಕ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ | ಸದಸ್ಯರು |
| 3. | ಸಹ ನಿರ್ದೇಶಕರು (ಪರೀಕ್ಷೆಗಳು) ಪದವಿ ಪೂರ್ವ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |

ರಾಜ್ಯ ಮಟ್ಟದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕರು, ಕೇಂದ್ರ ಕಛೇರಿ, ಇವರು ಎರಡೂ ಕಾರ್ಯಕ್ರಮಗಳ ಅನುಷ್ಠಾನದ ನೋಡಲ್ ಅಧಿಕಾರಿಗಳಾಗಿರತಕ್ಕದ್ದು. ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರು ಅಗತ್ಯ ಪೂರಕ ಸಿಬ್ಬಂದಿಯನ್ನು ಒದಗಿಸತಕ್ಕದ್ದು.

7) ರಾಜ್ಯ ಮಟ್ಟದ ಸಮಿತಿಯಿಂದ ಆಯ್ಕೆಯಾದ ವಿದ್ಯಾರ್ಥಿಗಳು / ವಿದ್ಯಾರ್ಥಿನಿಯರು ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶ ಪಡೆದಿರುವ ಬಗ್ಗೆ ಮಾಹಿತಿಯನ್ನು ಸಿ.ಇ.ಟಿ. ಘಟಕದಿಂದ ಹಾಗೂ ಕೃಷಿ ವಿಶ್ವವಿದ್ಯಾಲಯದಿಂದ ಪದವಿ ಪೂರ್ವ ಶಿಕ್ಷಣ ನಿರ್ದೇಶಕರು ಪಡೆದು ಮೇಲಿನ ಸಮಿತಿಗಳ ಮುಂದೆ ಮಂಡಿಸಿ, ಅಂಗೀಕಾರ ಪಡೆಯತಕ್ಕದ್ದು.

8) ಈ ಅರ್ಹ ಫಲಾನುಭವಿಗಳು ಸಿ.ಇ.ಟಿ. ಘಟಕ ಪ್ರವೇಶಕ್ಕೆ ನಿಗದಿಪಡಿಸಿರುವ ಮೊತ್ತದ ಮರುಪಾವತಿಗೆ ಅರ್ಹರಾಗಿರುತ್ತಾರೆ.

9) ಈ ಸೌಲಭ್ಯವು ಕರ್ನಾಟಕ ರಾಜ್ಯದಲ್ಲಿರುವ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ಫಲಾನುಭವಿಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

10) ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಕಾಲಮಿತಿಯನ್ನು ನಿಗದಿಗೊಳಿಸಲಾಗಿದೆ:-

1. ಪದವಿ ಪೂರ್ವ ನಿರ್ದೇಶನಾಲಯದಿಂದ ಜಿಲ್ಲಾ ಪದವಿ ಪೂರ್ವ ಉಪ ನಿರ್ದೇಶಕರಿಗೆ ಜಿಲ್ಲಾವಾರು ಪಟ್ಟಿಗಳನ್ನು ಒದಗಿಸುವುದು —

2. ಜಿಲ್ಲಾ ಪದವಿ ಪೂರ್ವ ಶಿಕ್ಷಣ ಉಪನಿರ್ದೇಶಕರು ಕಾಲೇಜುವಾರು ಪಟ್ಟಿಯನ್ನು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ನೀಡುವುದು —

3. ಪ್ರಾಂಶುಪಾಲರುಗಳ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು ಗುರ್ತಿನ ಚೀಟಿಯ ಪ್ರತಿಗಳೊಂದಿಗೆ ಜಿಲ್ಲೆಯ ಪದವಿ ಪೂರ್ವ ಉಪನಿರ್ದೇಶಕರುಗಳಿಗೆ ಸಲ್ಲಿಸುವುದು. —

4. ಜಿಲ್ಲಾ ಸಮಿತಿಯು ಪ್ರತಿ ಅರ್ಹ ವಿದ್ಯಾರ್ಥಿಯ ದಾಖಲೆಗಳನ್ನು ಪರಿಶೀಲಿಸಿ ಅಂತಿಮಗೊಳಿಸುವುದು —

5. ರಾಜ್ಯ ಸಮಿತಿಗೆ ಶಿಫಾರ್ಸುಗಳನ್ನು ಸಲ್ಲಿಸುವುದು —

ರಾಜ್ಯ ಮಟ್ಟದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕರು, ಕೇಂದ್ರ ಕಛೇರಿ, ಇವರು ಎರಡೂ ಕಾರ್ಯಕ್ರಮಗಳ ಅನುಷ್ಠಾನದ ನೋಡಲ್ ಅಧಿಕಾರಿಗಳಾಗಿರತಕ್ಕದ್ದು. ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರು ಅಗತ್ಯ ಪೂರಕ ಸಿಬ್ಬಂದಿಯನ್ನು ಒದಗಿಸತಕ್ಕದ್ದು.

7) ರಾಜ್ಯ ಮಟ್ಟದ ಸಮಿತಿಯಿಂದ ಆಯ್ಕೆಯಾದ ವಿದ್ಯಾರ್ಥಿಗಳು / ವಿದ್ಯಾರ್ಥಿನಿಯರು ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶ ಪಡೆದಿರುವ ಬಗ್ಗೆ ಮಾಹಿತಿಯನ್ನು ಸಿ.ಇ.ಟಿ. ಘಟಕದಿಂದ ಹಾಗೂ ಕೃಷಿ ವಿಶ್ವವಿದ್ಯಾಲಯದಿಂದ ಪದವಿ ಪೂರ್ವ ಶಿಕ್ಷಣ ನಿರ್ದೇಶಕರು ಪಡೆದು ಮೇಲಿನ ಸಮಿತಿಗಳ ಮುಂದೆ ಮಂಡಿಸಿ, ಅಂಗೀಕಾರ ಪಡೆಯತಕ್ಕದ್ದು.

8) ಈ ಅರ್ಹ ಫಲಾನುಭವಿಗಳು ಸಿ.ಇ.ಟಿ. ಘಟಕ ಪ್ರವೇಶಕ್ಕೆ ನಿಗದಿಪಡಿಸಿರುವ ಮೊತ್ತದ ಮರುಪಾವತಿಗೆ ಅರ್ಹರಾಗಿರುತ್ತಾರೆ.

9) ಈ ಸೌಲಭ್ಯವು ಕರ್ನಾಟಕ ರಾಜ್ಯದಲ್ಲಿರುವ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ಫಲಾನುಭವಿಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

10) ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಕಾಲಮಿತಿಯನ್ನು ನಿಗದಿಗೊಳಿಸಲಾಗಿದೆ:-

1. ಪದವಿ ಪೂರ್ವ ನಿರ್ದೇಶನಾಲಯದಿಂದ ಜಿಲ್ಲಾ ಪದವಿ ಪೂರ್ವ ಉಪ ನಿರ್ದೇಶಕರಿಗೆ ಜಿಲ್ಲಾವಾರು ಪಟ್ಟಿಗಳನ್ನು ಒದಗಿಸುವುದು —

2. ಜಿಲ್ಲಾ ಪದವಿ ಪೂರ್ವ ಶಿಕ್ಷಣ ಉಪನಿರ್ದೇಶಕರು ಕಾಲೇಜುವಾರು ಪಟ್ಟಿಯನ್ನು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ನೀಡುವುದು —

3. ಪ್ರಾಂಶುಪಾಲರುಗಳ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು ಗುರ್ತಿನ ಚೀಟಿಯ ಪ್ರತಿಗಳೊಂದಿಗೆ ಜಿಲ್ಲೆಯ ಪದವಿ ಪೂರ್ವ ಉಪನಿರ್ದೇಶಕರುಗಳಿಗೆ ಸಲ್ಲಿಸುವುದು. —

4. ಜಿಲ್ಲಾ ಸಮಿತಿಯು ಪ್ರತಿ ಅರ್ಹ ವಿದ್ಯಾರ್ಥಿಯ ದಾಖಲೆಗಳನ್ನು ಪರಿಶೀಲಿಸಿ ಅಂತಿಮಗೊಳಿಸುವುದು —

5. ರಾಜ್ಯ ಸಮಿತಿಗೆ ಶಿಫಾರಸುಗಳನ್ನು ಸಲ್ಲಿಸುವುದು —

6. ರಾಜ್ಯ ಸಮಿತಿಯು ಅಂತಿಮ ಶಿಫಾರಸ್ಸುಗಳನ್ನು ಸಲ್ಲಿಸುವುದು —

7. ಅರ್ಹ ವಿದ್ಯಾರ್ಥಿಗಳು ಪ್ರವೇಶಾವಕಾಶ ಪಡೆದ ಮಾಹಿತಿಗಳನ್ನು ಸಂಗ್ರಹಿಸುವುದು —

8. ಅರ್ಹ ಫಲಾನುಭವಿಗಳಿಗೆ ಶುಲ್ಕ ಪಾವತಿಸುವುದು. ಶುಲ್ಕ ಪಾವತಿಸುವುದು ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರವನ್ನು ಕಾಲೇಜು ಶಿಕ್ಷಣ ಆಯುಕ್ತರು ಮತ್ತು ಪ್ರತಿಭಾನ್ವಿತರಿಗೆ ಉಚಿತ ಶುಲ್ಕವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಚೆಕ್‌ಗಳ ಮೂಲಕ ವಿತರಿಸುವುದು —

ಮೇಲಿನ ವೇಳಾ ಪಟ್ಟಿಯನ್ನು ಸಂಬಂಧಿಸಿದ ಎಲ್ಲರೂ ಪಾಲಿಸತಕ್ಕದ್ದು.

(ಕೌಶಿಕ್ ಮುಖರ್ಜಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
(ಉನ್ನತ ಶಿಕ್ಷಣ),
ಶಿಕ್ಷಣ ಇಲಾಖೆ.

## ನಮೂನೆ

### ಪ್ರತಿಭಾವಂತರಿಗೆ ಶುಲ್ಕ ಉಚಿತ ಪುರಸ್ಕಾರ – [illegible]

| ಕ್ರ ಸಂ | ವಿದ್ಯಾರ್ಥಿ/ವಿದ್ಯಾರ್ಥಿನಿಯ ಹೆಸರು ಮತ್ತು ದ್ವಿತೀಯ ಪಿಯುಸಿ ವ್ಯಾಸಂಗ ಮಾಡಿದ ಕಾಲೇಜು, ಕಾಲೇಜು ಸಂಕೇತ ಸಂಖ್ಯೆ | ತಂದೆ/ತಾಯಿ ಹೆಸರು ಮತ್ತು ಉದ್ಯೋಗ | ಏಪ್ರಿಲ್ ದ್ವಿತೀಯ ಪಿಯುಸಿಯಲ್ಲಿ | | ಸಿಇಟಿ ಪರೀಕ್ಷೆಯ ನೋಂದಣಿ ಸಂಖ್ಯೆ | ವೃತ್ತಿ ಶಿಕ್ಷಣ ಕೋರ್ಸ್‌ಗೆ ಪ್ರವೇಶ ಪಡೆದ ಕಾಲೇಜಿನ ಹೆಸರು ಮತ್ತು ವಿಳಾಸ | ಯಾವ ಕೋರ್ಸ್‌ಗೆ ಪ್ರವೇಶ ಪಡೆದಿದ್ದಾರೆ | ಪಾವತಿಸಿರುವ ಶುಲ್ಕ | ಲಗತ್ತುಗಳ ವಿವರ |
|---|---|---|---|---|---|---|---|---|---|
| | | | ನೋಂದಣಿ ಸಂಖ್ಯೆ | ಗಳಿಸಿದ ಅಂಕಗಳು | | | | | |
| 1 | 2 | 3 | 4 | 5 | 6 | 7 | 8 | 9 | 10 |
| | | | | | | | | | |

ಸಹಿ ಮತ್ತು ಮೊಹರು

ಉಪ ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,
......................ಜಿಲ್ಲೆ

ಉಪ ನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
......................ಜಿಲ್ಲೆ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿ
...................... ಜಿಲ್ಲೆ

ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು
...................... ಜಿಲ್ಲೆ

ಉಪ ನಿರ್ದೇಶಕರು (ಆಹಾರ)
...................... ಜಿಲ್ಲೆ

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
...................... ಜಿಲ್ಲೆ,

ಜಿಲ್ಲಾಧಿಕಾರಿಗಳು,
...................... ಜಿಲ್ಲೆ,